## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **74(26)** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ.ಯು.ಬಿ.ವೆಂಕಟೇಶ(ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | **04.12.2023** |
| **ಉತ್ತರಿಸುವ ಸಚಿವರು** | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದಲ್ಲಿ 3 ಸಾವಿರಕ್ಕೂ ಹೆಚ್ಚು ಡೆಂಗ್ಯೂ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>2023ನೇ ಜನವರಿಯಿಂದ 27 ನೇ ನವೆಂಬರ್ ವರೆಗೆ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 57 ದೃಢಪಟ್ಟ ಡೆಂಗ್ಯೂ ಪ್ರಕರಣಗಳು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ) ವ್ಯಾಪ್ತಿಯಲ್ಲಿ 7256 ದೃಢಪಟ್ಟ ಡೆಂಗ್ಯೂ ಪ್ರಕರಣಗಳು ವರದಿಯಾಗಿರುತ್ತದೆ. |
| ಆ | ಬಂದಿದ್ದಲ್ಲಿ, ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಜಾಗೃತಿ ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ; | ಸಾರ್ವಜನಿಕ ಆರೋಗ್ಯ ದೃಷ್ಟಿಯಿಂದ ಅಗತ್ಯ ಮುನ್ನಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಗೂ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ | ಪ್ರಸಕ್ತ ಸಾಲಿನಲ್ಲಿ ಡೆಂಗ್ಯೂ ಪ್ರಕರಣದಿಂದ ಬಳಲಿ ಮೃತಪಟ್ಟವರ ಸಂಖ್ಯೆ ಎಷ್ಟು; ಡೆಂಗ್ಯೂ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | 2023ನೇ ಸಾಲಿನಲ್ಲಿ ರಾಜ್ಯದಲ್ಲಿ ಡೆಂಗ್ಯೂ ಜ್ವರದಿಂದ ಒಟ್ಟು 9 ಖಚಿತ ಮರಣ ಪ್ರಕರಣಗಳು ವರದಿಯಾಗಿದ್ದು, ಈ ಪೈಕಿ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ 4 ಪ್ರಕರಣಗಳು ವರದಿಯಾಗಿದೆ.<br><br>ಡೆಂಗ್ಯೂ ರೋಗ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |

**ಆಕುಕ 69 ಎಸ್‌ಎಂಎಂ 2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**

## ಚು. ರ. ಪ್ರ. ಸಂಖ್ಯೆ-26ಕ್ಕೆ ಅನುಬಂಧ.

ಡೆಂಗಿ ಜ್ವರವು ಈಡಿಸ್ ಸೊಳ್ಳೆಗಳಿಂದ ಹರಡುವ ರೋಗವಾಗಿದ್ದು, ಇದರ ನಿಯಂತ್ರಣಕ್ಕಾಗಿ ಎಲ್ಲಾ ಸಂಭಾವ್ಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಡೆಂಗಿ ಜ್ವರವನ್ನು ಕರ್ನಾಟಕ ಸಾರ್ವಜನಿಕ ಆರೋಗ್ಯ ಕಾಯ್ದೆಯ ಅಡಿಯಲ್ಲಿ ಅಧಿಸೂಚಿತ ರೋಗವೆಂದು ಘೋಷಿಸಲಾಗಿದ್ದು, (Dengue including DHF & DSS is under Notifiable disease Act under the Karnataka Public Health Act vide Govt. Notification NO HFW 30 SMM 98, Dt:13.3.1998)ಡೆಂಗಿ ಜ್ವರದ ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲಾ ಖಾಸಗಿ [illegible] ಸಹ ಡೆಂಗಿ ಪ್ರಕರಣಗಳ ಮಾಹಿತಿಯನ್ನು ಆರೋಗ್ಯ ಇಲಾಖೆಗೆ ಸಲ್ಲಿಸುವುದು ಕಡ್ಡಾಯವಾಗಿದೆ.
2. ಮುಂಗಾರು ಪೂರ್ವ, ಮುಂಗಾರು ಹಾಗೂ ಮುಂಗಾರಿನ ನಂತರದ ದಿನಗಳಲ್ಲಿ ಡೆಂಗಿ ಜ್ವರ ಪ್ರಕರಣವು ಅಧಿಕವಾಗುವ ಹಿನ್ನೆಲೆಯಲ್ಲಿ ವರ್ಷದ ಆರಂಭದಲ್ಲಿಯೇ, ಜಿಲ್ಲಾ [illegible] ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಿಗೆ ಮಾರ್ಗಸೂಚಿ ಸುತ್ತೋಲೆಯನ್ನು ಕಳುಹಿಸಿದ್ದು, ಡೆಂಗಿ ನಿಯಂತ್ರಣಕ್ಕೆ ಸನ್ನದ್ಧ ಸ್ಥಿತಿಯಲ್ಲಿರಲು ಸೂಚಿಸಲಾಗಿದೆ.
3. ಪ್ರವಾಹ ಹಾಗೂ ನಂತರದ ಸಮಯದಲ್ಲಿ ಈಡಿಸ್ ಸೊಳ್ಳೆಗಳ ಉತ್ಪತ್ತಿತಾಣ ನಾಶ ಹಾಗೂ ಡೆಂಗಿ ನಿಯಂತ್ರಣದ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು ಮಾರ್ಗದರ್ಶಿ ಸುತ್ತೋಲೆಗಳನ್ನು ನೀಡಲಾಗಿದೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಅಧ್ಯಕ್ಷತೆ ದಿನಾಂಕ:6.6.2023 ರಂದು, ಇತರ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕೃಷಿ, ಮೀನುಗಾರಿಕೆ, ಸಾರಿಗೆ ಇತ್ಯಾದಿಗಳೊಂದಿಗೆ ಸಭೆ ನಡೆಸಿ, ಡೆಂಗಿ ಜ್ವರ ನಿಯಂತ್ರಣದಲ್ಲಿ, ಇತರ ಇಲಾಖೆಗಳ ಸಹಕಾರವನ್ನು ಕೋರಲಾಯಿತು.
5. ಬಿಬಿಎಂಪಿ ವ್ಯಾಪ್ತಿಯಲ್ಲಿ, ಡೆಂಗಿ ಜ್ವರ ನಿಯಂತ್ರಣ ಕ್ರಮಗಳ ಕುರಿತು ಚರ್ಚಿಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಲು ದಿನಾಂಕ:7.9.2023 ರಂದು . ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ, ಸಭೆಯಲ್ಲಿ ನಡೆಸಲಾಯಿತು.
6. ರಾಜ್ಯಾದ್ಯಂತ ಅನುಷ್ಠಾನಗೊಂಡಿರುವ ಡೆಂಗಿ ಜ್ವರ ನಿಯಂತ್ರಣ ಕ್ರಮಗಳ ಕುರಿತು ಸೂಕ್ತ ಸಲಹೆ ಸೂಚನೆಗಳನ್ನು ನೀಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: [illegible] ರಂದು, ಇತರ ಇಲಾಖಾ ಕಾರ್ಯದರ್ಶಿಗಳೊಂದಿಗೆ ಸಭೆ ನಡೆಸಲಾಯಿತು.
7. ಈ ನಿಟ್ಟಿನಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ , ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು – ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆ, ಇವರು ಜಂಟಿ ಸುತ್ತೋಲೆಯನ್ನು ಹೊರಡಿಸಿರುತ್ತಾರೆ. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಹಾಗು ಅಭಿಯಾನ ನಿರ್ದೇಶಕರು – ರಾಷ್ಟ್ರೀಯ ಆರೋಗ್ಯ ಅಭಿಯಾನ, ಇವರು ಕ್ರಮವಾಗಿ ಅರೆ ಸರ್ಕಾರಿ ಪತ್ರ ಹಾಗೂ ಸುತ್ತೋಲೆಗಳನ್ನು ಕಳುಹಿಸಿದ್ದಾರೆ.
8. ಡೆಂಗಿ ರೋಗದ ಶೀಘ್ರ ಪತ್ತೆಗಾಗಿ ಆರೋಗ್ಯ ಕಾರ್ಯಕರ್ತರು ಹಾಗೂ ಆಶಾ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಜ್ವರ ಸಮೀಕ್ಷಾ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಇದೇ ಸಮಯದಲ್ಲಿ ಡೆಂಗೀ ಜ್ವರದ ಲಕ್ಷಣಗಳು ಹಾಗೂ ಈಡಿಸ್ ಸೊಳ್ಳೆಗಳು ಉತ್ಪತ್ತಿತಾಣ ಮತ್ತು ಅವುಗಳ ನಿರ್ಮೂಲನೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ ಅರಿವು ಮೂಡಿಸುತ್ತಿದ್ದಾರೆ.
9. ಹೆಚ್ಚು ಜ್ವರ ಪ್ರಕರಣಗಳು ವರದಿಯಾಗುವ ಸ್ಥಳಗಳಲ್ಲಿ ಫೀವರ್ ಕ್ಲಿನಿಕ್ ಸ್ಥಾಪಿಸಿ, ರೋಗಿ ಶುಶ್ರೂಷೆಯನ್ನು ಪತ್ತೆ ಹಚ್ಚುವ ಕಾರ್ಯವನ್ನು ಮಾಡಲಾಗುತ್ತಿದೆ.
10. ಶಂಕಿತ ಡೆಂಗಿ ಪ್ರಕರಣಗಳ ರಕ್ತದ ಮಾದರಿಗಳನ್ನು ಸೆಂಟಿನಲ್ ಪ್ರಯೋಗಾಲಯಗಳಲ್ಲಿ ಉಚಿತವಾಗಿ ಪರೀಕ್ಷಿಸಲಾಗುತ್ತಿದೆ. ಇದಕ್ಕಾಗಿ, ಅಗತ್ಯವಿರುವ ELISA ಆಧಾರಿತ ಎನ್‌ಎಸ್1 ಹಾಗೂ ಐ ಜಿ ಎಂ ಕಿಟ್ಟುಗಳನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲಾ ಪ್ರಯೋಗಾಲಯಗಳಿಗೆ ಸರಬರಾಜು ಮಾಡಲಾಗಿದೆ.
11. ಬಿಬಿಎಂಪಿ ವ್ಯಾಪ್ತಿಯಲ್ಲಿನ ನಗರ ಆರೋಗ್ಯ ಕೇಂದ್ರಗಳಲ್ಲಿ ಸಂಗ್ರಹವಾದ ರಕ್ತ ಮಾದರಿಗಳನ್ನು ಬೌರಿಂಗ್ ಆಸ್ಪತ್ರೆಯಲ್ಲಿರುವ ಆಸ್ಪತ್ರೆಯಲ್ಲಿ ಡೆಂಗಿ ಪರೀಕ್ಷಾ ಪ್ರಯೋಗಾಲಯನ್ನು ಸ್ಥಾಪಿಸಿ ಡೆಂಗಿ ಪರೀಕ್ಷೆ ಮಾಡಲಾಗುತ್ತಿದೆ.

Scanned by CamScanner

12. ಎಲ್ಲಾ ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಡೆಂಗಿ ಜ್ವರ ಪ್ರಕರಣಗಳ ನಿರ್ವಹಣೆ ಮತ್ತು ರೋಗಿ ಲಕ್ಷಣಗಳಿಗೆ ಅನುಗುಣವಾದ ಚಿಕಿತ್ಸೆ ವ್ಯವಸ್ಥೆ ಮಾಡಲಾಗಿದೆ. ಅಗತ್ಯವಿದ್ದಲ್ಲಿ ಹೆಚ್ಚುವರಿ ಹಾಸಿಗೆಗಳ ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಡೆಂಗಿ ಜ್ವರಕ್ಕೆ ಬೇಕಾದ ನಿರ್ವಹಣಾ ವ್ಯವಸ್ಥೆಯನ್ನು ಸಹ ಒದಗಿಸಲಾಗಿದೆ. ಡೆಂಗಿ ರೋಗ ನಿರ್ವಹಣೆಗೆ ಬೇಕಾಗುವ ಜೀವರಕ್ಷಕ ಔಷಧಿಗಳು ಮತ್ತು ರೋಗ ಲಕ್ಷಣಗಳಿಗೆ ಅನುಗುಣವಾಗಿ ಬೇಕಾದ ಔಷಧೋಪಕರಣಗಳನ್ನು ಜಿಲ್ಲಾ ಮಟ್ಟದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಒದಗಿಸಲಾಗಿದೆ.

13. ಡೆಂಗಿ ರಕ್ತಸ್ರಾವ ಜ್ವರ (ಡೆಂಗಿ ಹೆಮರೇಜಿಕ್ ಫೀವರ್) ನಿರ್ವಹಣೆಗಾಗಿ, ಜಿಲ್ಲಾ ಮಟ್ಟದಲ್ಲಿ blood componentಗಳ ಲಭ್ಯತೆಯ ಬಗ್ಗೆ ಇಲಾಖೆಯ ಅಂತರ್ಜಾಲದಲ್ಲಿ ಅಪ್‌ಲೋಡ್ ಮಾಡಲಾಗಿದೆ ಹಾಗೂ ಈ ಮಾಹಿತಿಯನ್ನು ಪ್ರತಿ ದಿನವು ಪರಿಷ್ಕರಿಸಿ ಪ್ರಕಟಿಸಲಾಗುತ್ತಿದೆ. (www.karhfw.gov.in) (jeevasanjivini)

14. ಡೆಂಗಿ ಪರೀಕ್ಷೆ ನಡೆಸಿಕೊಳ್ಳಲು ಎಲಿಸಾ ಆಧಾರಿತ ಪ್ರತಿ ಪರೀಕ್ಷೆಗೆ ರೂ. 250/- ಮೀರದಂತೆ ದರವನ್ನು ನಿಗದಿಗೊಳಿಸಿ ಖಾಸಗಿ ಆಸ್ಪತ್ರೆಗಳಿಗೆ ಸೂಚನೆ ನೀಡಲಾಗಿದೆ. ಹಾಗೂ ಒಂದು ಯುನಿಟ್ ಪ್ಲೇಟ್‌ಲೆಟ್‌ಗಳಿಗೆ ರೂ.850 -ಮೀರಬಾರದೆಂದು ನಿಗದಿಪಡಿಸಲಾಗಿದೆ.

15. ಬೆಂಗಳೂರು ನಗರ ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ, "ವಿಬಿಡಿ ಮರಣಶಾಸನ ಸಮಿತಿ (VBD Death Audit Committee)" ಯನ್ನು ರಚಿಸಲಾಗಿದ್ದು, ಈ ಸಮಿತಿಯು ಡೆಂಗಿ ರೋಗದಿಂದ ಸಂಭವಿಸಿರಬಹುದಾದ ಎಲ್ಲಾ ಮರಣ ಪ್ರಕರಣಗಳ ಸೂಕ್ತ ತಪಾಸಣೆ ನಡೆಸಿ ದೃಢೀಕರಿಸಲಾಗುತ್ತಿದೆ.

16. ಡೆಂಗಿ ನಿಯಂತ್ರಣಕ್ಕೆ ಈಡಿಸ್ ಸೊಳ್ಳೆಗಳ ಉತ್ಪತ್ತಿತಾಣ ನಾಶವು ಪ್ರಮುಖವಾಗಿರುವುದರಿಂದ, ಆರೋಗ್ಯ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತರು ಪ್ರತಿ ಮನೆಯ ಒಳಾಂಗಣ ಮತ್ತು ಹೊರಾಂಗಣದಲ್ಲಿನ ನೀರಿನ ಶೇಖರಣೆಗಳಲ್ಲಿ ಈಡೀಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಪತ್ತೆಹಚ್ಚಿ ಅವುಗಳ ನಿರ್ಮೂಲನೆಗೆ ಕ್ರಮಕೈಗೊಳ್ಳುತ್ತಿದ್ದಾರೆ.

17. ಈಡಿಸ್ ಲಾರ್ವಾ ಸಮೀಕ್ಷೆ ಹಾಗೂ ಉತ್ಪತ್ತಿ ತಾಣ ನಾಶ ಚಟುವಟಿಕೆಗೆ ಅಗತ್ಯವಿರುವ ಟೆಮಿಫಾಸ್ ದ್ರಾವಣ ಹಾಗೂ ತುರ್ತು ಸಂದರ್ಭಗಳಲ್ಲಿ ಒಳಾಂಗಣ ಧೂಮೀಕರಣಕ್ಕೆ ಬಳಸುವ ಪೈರಿಥ್ರಮ್ ಎಕ್ಸ್‌ಟ್ರಾಕ್ಟ್ ರಾಸಾಯನಿಕಗಳ ಅಗತ್ಯದಾಸ್ತಾನು ಲಭ್ಯವಿದ್ದು ಸಮರ್ಪಕವಾಗಿ ಬಳಸಲಾಗುತ್ತಿದೆ.

18. ಸಹ ನಿರ್ದೇಶಕರು-ಎನ್‌ವಿಬಿಡಿಸಿಪಿ, ಇವರ ಅಧ್ಯಕ್ಷತೆಯಲ್ಲಿ ವಲಯವಾರು ಸಭೆಯನ್ನು ಪ್ರತಿ ವಾರಕ್ಕೊಮ್ಮೆ ವರ್ಚುವಲ್ ಮಾಧ್ಯಮದ ಮೂಲಕ ನಡೆಸಲಾಗುತ್ತಿದ್ದು, ಬಿಬಿಎಂಪಿ ಸೇರಿದಂತೆ ಜಿಲ್ಲಾವಾರು ಡೆಂಗೀ ಪರಿಸ್ಥಿತಿಯನ್ನು ವಿಶ್ಲೇಷಿಸಿ , ನಿಯಂತ್ರಣಕ್ಕಾಗಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ.

19. ಬಿಬಿಎಂಪಿ ವ್ಯಾಪ್ತಿಯ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಡೆಂಗಿ ಪ್ರಕರಣಗಳ ಮಾಹಿತಿಯನ್ನು IHIP portal ಮೂಲಕ ಪಡೆಯಲಾಗುತ್ತಿದ್ದು, ವಿವರವನ್ನು ಸಂಬಂಧಪಟ್ಟ ವಾರ್ಡ್ ವೈದ್ಯರೊಂದಿಗೆ ಹಂಚಿಕೊಂಡು ತುರ್ತಾಗಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**ಡೆಂಗೀ ನಿಯಂತ್ರಣದ ನಿಟ್ಟಿನಲ್ಲಿ ಅನುಷ್ಠಾನಗೊಳಿಸಿರುವ ಆರೋಗ್ಯ ಶಿಕ್ಷಣ ಚಟುವಟಿಕೆಗಳು:**

ಮಾಹಿತಿ ಶಿಕ್ಷಣ ಮತ್ತು ಸಂಪರ್ಕ ಸಂವಹನ ಚಟುವಟಿಕೆಗಳ ಮೂಲಕ ಸಮುದಾಯದಲ್ಲಿ ಉತ್ತಮ ಜಾಗೃತಿ ಮೂಡಿಸಲು ಸ್ಥಳೀಯ ಭಾಷೆಗಳಿಗನುಗುಣವಾಗಿ ಐಇಸಿ ಚಟುವಟಿಕೆಗಳನ್ನು IPC, MidMedia, Social Media, News Media, Mass Media , Digital Media ಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುತ್ತಿದೆ.

1) ಈ ಸಂದರ್ಭದಲ್ಲಿ, ದೂರದರ್ಶನ ಹಾಗೂ ಆಕಾಶವಾಣಿಯಲ್ಲಿ ನಡೆದ ಸಂದರ್ಶನದಲ್ಲಿ ಹಾಗೂ ಫೋನ್ ಇನ್ ಕಾರ್ಯಕ್ರಮದಲ್ಲಿ ರಾಜ್ಯ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡು, ಅಗತ್ಯ ಮಾಹಿತಿಯನ್ನು ಹಾಗೂ ಡೆಂಗೀ ನಿಯಂತ್ರಣದಲ್ಲಿ ಸಮುದಾಯದ ಪಾತ್ರದ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿರುತ್ತಾರೆ.

2) ನವೀನ ಮಾದರಿಯಲ್ಲಿ ಡೆಂಗಿ ನಿಯಂತ್ರಣದ ಬಗ್ಗೆ ಸ್ತಬ್ಧ ಚಿತ್ರಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲು 'ಡೆಂಗಿ ರಥ' ವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಸಂಚರಿಸುತ್ತಿದ್ದು, ಅಗತ್ಯ ಆರೋಗ್ಯ ಶಿಕ್ಷಣ ಹಾಗೂ ಅರಿವು ಮೂಡಿಸಲು ಕರ ಪತ್ರಗಳನ್ನು ಹಂಚಲಾಗುತ್ತಿದೆ.

3) ಶಾಲಾ ಶಿಕ್ಷಕರುಗಳಿಗೆ ಡೆಂಗೀ ನಿಯಂತ್ರಣ ಮತ್ತು ಮುಂಜಾಗ್ರತೆ ಬಗ್ಗೆ ಅಡ್ವೊಕೆಸಿ ಕಾರ್ಯಾಗಾರವನ್ನು ನಡೆಸಲಾಗಿದೆ. ರಾಜ್ಯ ಮಟ್ಟ, ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟದಲ್ಲಿ ಅರಿವು ಮೂಡಿಸಲಾಗಿದೆ ಅದರಂತೆ

ತರಬೇತಿ ಹೊಂದಿದ ವಿಜ್ಞಾನ ಶಿಕ್ಷಕರು ಮಕ್ಕಳಿಗೆ ಡೆಂಗಿ ಬಗ್ಗೆ ಅರಿವು ಮೂಡಿಸಿ, ಸಾರ್ವಜನಿಕರ ಪಾತ್ರದ ಬಗ್ಗೆಯೂ ತಿಳಿಸುತ್ತಾರೆ.

4) ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ 5 ರಿಂದ 10ನೇ ತರಗತಿ ಮಕ್ಕಳಿಗೆ ಡೆಂಗ್ಯೂ ನಿಯಂತ್ರಣದ ಬಗ್ಗೆ ಚಿತ್ರ ಬಿಡಿಸುವ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

5) ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ಹಾಗೂ ಶಿಕ್ಷಣ ಇಲಾಖೆ ಇವರ ಸಹಯೋಗದೊಂದಿಗೆ ಡೆಂಗಿ ನಿಯಂತ್ರಣದ ಬಗ್ಗೆ ಅರಿವು ಮೂಡಿಸಲಾಗಿದೆ. ಹಾಗೂ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಸೊಳ್ಳೆ ನಿಯಂತ್ರಣದಲ್ಲಿ ನವೀನ ವಿಧಾನಗಳ ಕುರಿತು ಶಾಲಾ ವಿದ್ಯಾರ್ಥಿಗಳಿಗೆ ವಸ್ತು ಪ್ರದರ್ಶನ ವನ್ನು ನಡೆಸಲಾಗುತ್ತಿದೆ.

6) ವಾರ್ಡ ಮಟ್ಟದಲ್ಲಿ ಅಡ್ವೊಕೆಸಿ ಕಾರ್ಯಗಾರಗಳನ್ನು ( ಗ್ರಾಮದ ಮುಖಂಡರು, ಪಂಚಾಯಿತ ಪ್ರತಿನಿಧಿಗಳು, ಶಾಲಾ ಶಿಕ್ಷಕರು ಅಂಗನವಾಡಿ ಕಾರ್ಯಕರ್ತೆಯರು, ಸ್ತ್ರೀ ಶಕ್ತಿ ಸಂಘದ ಪದಾಧಿಕಾರಿಗಳು, ಸ್ವಯಂ ಸೇವಕರು, ಹಾಲು ಉತ್ಪಾಧಕರ ಸಂಘದ ಸದಸ್ಯರುಗಳು , ಧಾರ್ಮಿಕ ಮುಖಂಡರು ಒಳಗೊಂಡಂತೆ ) ನಡೆಸಲಾಗಿದೆ.

7) ಪ್ರದರ್ಶನ ಫಲಕಗಳೊಂದಿಗೆ (ಪ್ಲೆಕಾರ್ಡ್) ಜಾಥಾಕಾರ್ಯಕ್ರಮ ಹಾಗೂ ವಸ್ತು ಪ್ರದರ್ಶನ

8) ಹೋರ್ಡಿಂಗ್‌ಗಳು, ಬ್ಯಾನರ್‌ಗಳು, ಪೋಸ್ಟರ್‌ಗಳ (ಜನಜಂಗುಳಿ ಪ್ರಮುಖ ಸ್ಥಳಗಳು)ಅಳವಡಿಕೆ

9) ಮುದ್ರಿತ ವಸ್ತುಗಳು ಮೂಲಕ ಐಇಸಿ ಚಟುವಟಿಕೆಗಳು (ಕರಪತ್ರ, ಮಡಿಕೆಪತ್ರ, ಭಿತ್ತಿ ಪತ್ರಗಳು, ಇತ್ಯಾದಿ.)

10) ಸ್ಥಳೀಯ ಚಾನಲ್‌ಗಳಲ್ಲಿ ಟಿ.ವಿ.ಸ್ಪಾಟ್‌ಗಳು/ ಸ್ಕ್ರಾಲ್ ಸಂದೇಶಗಳ ಭಿತ್ತರ.

11) ಸಾಮಾಜಿಕ ಮಾಧ್ಯಮಗಳ ಮೂಲಕ ಸಂದೇಶಗಳು ಮತ್ತು ಸಮೂಹ ಮಾಧ್ಯಮದ ಮೂಲಕ (ಫೇಸ್‌ಬುಕ್, ಯೂಟ್ಯೂಬ್, ವಾಟ್ಸ್‌ಆಪ್, ಇತ್ಯಾದಿ.) ಸಂದೇಶಗಳು ಹಾಗೂ ವಿಡಿಯೋಸ್ಪಾಟ್‌ಗಳ ರವಾನೆ.

12) ಬಸ್ಸುಗಳು ಮತ್ತು ಬಸ್ ತಂಗುದಾಣಗಳ ಮೇಲೆ ಪ್ರಚಾರ ಹಾಗೂ ರಾಜ್ಯ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಮೈಕಿಂಗ್, ವಿಡಿಯೋ ಆಡಿಯೋ ಕ್ಲಿಪಿಂಗ್‌ಗಳನ್ನು ಭಿತ್ತರಿಸುವುದು.

ಒಟ್ಟಾರೆಯಾಗಿ, ಅಗತ್ಯ ಮುಂಜಾಗ್ರತಾ ಹಾಗೂ ನಿಯಂತ್ರಣ ಕ್ರಮಗಳ ಸಮರ್ಪಕ ಅನುಷ್ಠಾನದಿಂದ ಬೆಂಗಳೂರು ನಗರದಲ್ಲಿ ಡೆಂಗೀ ಪರಿಸ್ಥಿತಿಯು ಹತೋಟಿಯಲ್ಲಿದೆ ಎಂಬ ಅಂಶವನ್ನು ತಮ್ಮ ಅವಗಾಹನೆಗೆ ಸಲ್ಲಿಸಲಾಗಿದೆ.

ಸಹ ನಿರ್ದೇಶಕರು – ಎನ್ ವಿ ಬಿ ಡಿ ಸಿ ಪಿ